**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕ : 20.01.2026**

**<u>ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರಿಂದಃ</u>**

1. ಅರ್ಜಿದಾರರು ಈ ಅರ್ಜಿಯನ್ನು ಯಾವ ಪರಿಹಾರ ಕೋರಿ ಸಲ್ಲಿಸಿದ್ದಾರೆಂದು ಗೊತ್ತಿದೆ. ಅರ್ಜಿದಾರರ ಪರಿಚಯ ನನಗಿಲ್ಲ. ತಕರಾರಿನ ಹಾಗೂ ಪ್ರಮಾಣಪತ್ರದ ಸಂಗತಿಗಳನ್ನು ನಾನೇ ವಕೀಲರಿಗೆ ಮಾಹಿತಿ ನೀಡಿ ಬರೆಸಿರುತ್ತೇನೆ. ತಮ್ಮಯ್ಯನವರು ನೀಡಿದ ದೂರಿನ ಮೇಲೆ ನಿಮ್ಮ ವಿರುದ್ಧ ಎಸ್ ಆರ್ ಪಟ್ಟಣ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು ಎಂದರೆ ಸರಿ. ಆ ಪ್ರಕರಣದಲ್ಲಿ ನೀವು ದಂಡ ಕಟ್ಟಿ ಆರೋಪವನ್ನು ಒಪ್ಪಿಕೊಂಡಿರುತ್ತೀರಾ ಎಂದರೆ ಸರಿ. ನನ್ನ ತಪ್ಪಿನಿಂದ ಅಪಘಾತವಾಗಿದೆ ಎಂದು ಇದೇ ನ್ಯಾಯಾಲಯದಲ್ಲಿ ದಂಡ ಕಟ್ಟಿರುತ್ತೀರಾ ಎಂದರೆ ಸರಿ. ಅರ್ಜಿದಾರರು ಮದ್ಯಪಾನ ಮಾಡಿಕೊಂಡು ಬಂದು ನೀವು ಓಡಿಸುತ್ತಿದ್ದ ವಾಹನಕ್ಕೆ ಅಡ್ಡ ಬಂದರು ಎಂದು ನಿಮ್ಮ ಪ್ರಮಾಣಪತ್ರದ 13 ನೇ ಕಂಡಿಕೆಯಲ್ಲಿ ಹೇಳಿರುವ ಎಲ್ಲಾ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ. ನಾನು ಗಾರ್ಮೆಂಟ್ಸ್ ನಲ್ಲಿ ಸಹಾಯಕನಾಗಿ ಕೆಲಸ ಮಾಡುತ್ತಿದ್ದೇನೆ. ಅರ್ಜಿದಾರರು ಪರಿಹಾರ ಪಡೆದುಕೊಳ್ಳಲೇ ಇರಲಿ ಎಂದು ನೀವು ಸುಳ್ಳು ಸಂಗತಿಗಳನ್ನು ಸೃಷ್ಟಿಸಿಕೊಂಡು ತಕರಾರು ಮತ್ತು ನಿಮ್ಮ ಪ್ರಮಾಣಪತ್ರದಲ್ಲಿ ಹೇಳಿರುತ್ತೀರಾ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ.</u>**

**ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗೊಳಿಸಲಾಯಿತು.**

**ಓ ಹೇ ಕೇ ಸ ಇ ಒ**

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಪಾಂಡವಪುರ.**